3) ಬನ್ನೇರುಘಟ್ಟದಲ್ಲಿ 66:11 ಕೆ.ವಿ. ವಿದ್ಯುತ್ ಉಪಕೇಂದ್ರದ ನಿರ್ಮಾಣವನ್ನು ಪ್ರಾರಂಭಿಸಲಾಗಿದ್ದು, ಜೂನ್-2000ರ ಅಂತ್ಯದ ವೇಳೆಗೆ ನಿರ್ಮಾಣ ಕಾರ್ಯಗಳನ್ನು ಪೂರ್ಣಗೊಳಿಸುವ ಗುರಿಯನ್ನು ಹೊಂದಲಾಗಿದೆ. ನಿಗಮವು ಎದುರಿಸುತ್ತಿರುವ ಆರ್ಥಿಕ ಮುಗ್ಗಟ್ಟಿನ ಪರಿಸ್ಥಿತಿಯಲ್ಲಿ ನಿಗಮವು ತನ್ನ ಸ್ವಂತ ಆರ್ಥಿಕ ಸಂಪನ್ಮೂಲಗಳಿಂದಲೇ ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳುವುದು ಬಹಳ ಕಷ್ಟಕರವಾಗಿರುತ್ತದೆ. ಹಣಕಾಸು ಸಂಸ್ಥೆಗಳಾದ ಗ್ರಾಮೀಣ ವಿದ್ಯುದೀಕರಣ ನಿಗಮ, ಪವರ್ ಫೈನಾನ್ಸ್ ಕಾರ್ಪೊರೇಷನ್ ಇತ್ಯಾದಿ ಸಂಸ್ಥೆಗಳಿಂದ ಸಾಲ ಸೌಲಭ್ಯವನ್ನು ಪಡೆದು, ನಿರ್ಮಾಣ ಕಾರ್ಯಗಳನ್ನು ಕೈಗೊಳ್ಳಬೇಕಾಗಿರುತ್ತದೆ. ಆದುದರಿಂದ ವಿಳಂಬವಾಗುವುದು ಅನಿವಾರ್ಯವಾಗಿರುತ್ತದೆ.

ಬಾಗಲಕೋಟೆ ಜಿಲ್ಲೆಯ "ಕಲಾದಗಿ- ಕಾತರಕಿ" ಹತ್ತಿರ ಬಂದಾರದ ನಿರ್ಮಾಣ:

83 (184) ಶ್ರೀ ಜೆ.ಟಿ. ಪಾಟೀಲ್ (ಬೀಳಗಿ): ಮಾನ್ಯ ಸಣ್ಣ ನೀರಾವರಿ ರಾಜ್ಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

1) ಬಾಗಲಕೋಟೆ ಜಿಲ್ಲೆ ಕಲಾದಗಿ-ಕಾತರಕಿ ಹತ್ತಿರ ಬಂದಾರವನ್ನು ರೂ. 42.00 ಲಕ್ಷ ವೆಚ್ಚದಲ್ಲಿ ಮಾಡಿ ಅರ್ಧಕ್ಕೆ ನಿಲ್ಲಿಸಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

2) ಹಾಗಿದ್ದಲ್ಲಿ ಇದಕ್ಕೆ ಕಾರಣಗಳೇನು;

3) ಇದು ಅಲ್ಲಿನ ಜನರಿಗೆ ಅತೀ ಅವಶ್ಯವಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೆ;

4) ಹಾಗಿದ್ದಲ್ಲಿ ಇದನ್ನು ಪುನಃ ಪ್ರಾರಂಭಿಸಲು ಕಳುಹಿಸಲಾಗಿರುವ ತಾಂತ್ರಿಕ ಸಮಿತಿಯ ಅಭಿಪ್ರಾಯವೇನು;

5) ಈ ಬಂದಾರ ಕೆಲಸವನ್ನು ಯಾವಾಗ ಮುಗಿಸಲಾಗುವುದು?

ಶ್ರೀ ಎಸ್. ಕುಮಾರ್ ಬಂಗಾರಪ್ಪ (ಸಣ್ಣ ನೀರಾವರಿ ರಾಜ್ಯ ಸಚಿವರು)

1) ಬಂದಿದೆ.

2) ಈ ಕಲಾದಗಿ ಬ್ಯಾರೇಜನ್ನು ಸೇತುವೆಯನ್ನೊಳಗೊಂಡ ಬಂದಾರವನ್ನಾಗಿ ಮಾರ್ಪಡಿಸಲು ಸಾರ್ವಜನಿಕ ಹಿತಾಸಕ್ತಿಯಿಂದ ಆಂದಾಜನ್ನು ಮಾರ್ಪಡಿಸಿದೆ. ಪ್ರಸ್ತುತ ಆಲಮಟ್ಟಿ ಜಲಾಶಯ ಎತ್ತರವನ್ನು 519.60 ಮೀಟರ್‌ನಿಂದ 524.25 ಮೀಟರ್‌ಗೆ ಏರಿಸಿದಾಗ ಬ್ಯಾರೇಜ್‌ನ ಸುರಕ್ಷತೆಯ ಬಗ್ಗೆ ತಾಂತ್ರಿಕ ಪರಿಶೀಲನೆಗಾಗಿ ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿ ಮುಂದೆ ಮಂಡಿಸಿದೆ.

3) ಬಂದಿದೆ.

4) ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯು ಸದರಿ ಬ್ಯಾರೇಜ್ ಕುರಿತು ಕೆಲವು ಹೆಚ್ಚಿನ ಮಾಹಿತಿಗಳನ್ನು ಕೇಳಿದೆ.

5) ತಾಂತ್ರಿಕ ಮೌಲ್ಯ ನಿರ್ಣಯ ಸಮಿತಿಯ ಒಪ್ಪಿಗೆ ದೊರೆತ ನಂತರ ಕೆಲಸ ಪ್ರಾರಂಭಿಸಿ ಪೂರ್ಣಗೊಳಿಸಲು ಸುಮಾರು ಒಂದು ವರ್ಷ ಕಾಲ ಬೇಕಾಗುತ್ತದೆ.